ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 28/3/21

# ಕೇಂದ್ರದ ಕೆಲವು ಧೋರಣೆಗಳಿಂದ ಪ್ರಾದೇಶಿಕತೆಗೆ ಧಕ್ಕೆ

ಉವಾ 28/3/21

ಮೈಸೂರು: ಕೇಂದ್ರ ಸರ್ಕಾರ ಕೆಲವು ಧೋರಣೆಗಳು ಪ್ರಾದೇಶಿಕತೆಗೆ ಧಕ್ಕೆಯಾಗುತ್ತಿದ್ದು ಇದರಿಂದ ಒಕ್ಕೂಟ ವ್ಯವಸ್ಥೆ ಸಡಿಲವಾಗುತ್ತಿದೆ ಎಂದು ಸಣ್ಣ ನೀರಾವರಿ ಸಚಿವ ಜೆ.ಸಿ.ಮಾಧುಸ್ವಾಮಿ ತಮ್ಮದೇ ಪಕ್ಷದ ವಿರುದ್ಧ ಬೇಸರ ವ್ಯಕ್ತಪಡಿಸಿದರು.



ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ನಗರಘಟಕದಿಂದ ಬಿ.ಎಸ್.ಸಿದ್ದಲಿಂಗಶೆಟ್ಟರ ದತ್ತಿ, ಸಿದ್ದಮ್ಮಣ್ಣಿ ಸಿದ್ದಲಿಂಗಶೆಟ್ಟರ ದತ್ತಿ, ಸಿದ್ದನಂಜಪ್ಪ ದತ್ತಿ, ಶಾಂತಾದೇವಿ ಸಿದ್ದನಂಜಪ್ಪ ದತ್ತಿಯಿಂದ ರಾಷ್ಟ್ರೀಯ ಐಕ್ಯತೆ ಮತ್ತು ಪ್ರಾದೇಶಿಕ ಸ್ವಾತಂತ್ರ್ಯ ವಿಷಯದ ಬಗ್ಗೆ ಶನಿವಾರ ನಡೆದ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಕೇಂದ್ರೀಕರಣ ಧೋರಣೆಯಿಂದ ದೇಶದಲ್ಲಿ ಪ್ರಾದೇಶಿಕತೆ ಕಾವು ಹೆಚ್ಚಾಗುತ್ತಿದೆ. ರಾಜ್ಯದ ಪಟ್ಟಿಯಲ್ಲಿರುವ ಇಲಾಖೆಗಳು ನಿಧಾನವಾಗಿ ಕೇಂದ್ರದ ವಶವಾಗುತ್ತಿದ್ದು ಎಲ್ಲವೂ ವಿಕೇಂದ್ರೀಕರಣ ಆಗುವ ಬದಲು ಕೇಂದ್ರೀಕರಣವಾಗುತ್ತಿದೆ. ಸರ್ವಾಧಿಕಾರಿ ಧೋರಣೆಯಿಂದ ಎಂದಿಗೂ ಪ್ರಾದೇಶಿಕ ಸ್ವಾತಂತ್ರ್ಯಕ್ಕೆ ಒಳಿತಾಗುವುದಿಲ್ಲ. ಅಲ್ಲದೆ, ಕೇಂದ್ರ ಸರ್ಕಾರದ ಸಾಕಷ್ಟು ಯೋಜನೆಗಳು ಉತ್ತಮ ಪರಿಸ್ಥಿತಿಯಲ್ಲಿರುವವರಿಗೆ ಮತ್ತಷ್ಟು ಸೌಲಭ್ಯಗಳನ್ನು ನೀಡುವಂತಿದೆ ಎಂದು ಹೇಳಿದರು.

ಸ್ವಾತಂತ್ರ್ಯ ಬಂದಾಗ 16 ರಾಜ್ಯಗಳಿದ್ದವು. ಆದರೆ, ಈಗ 29 ರಾಜ್ಯಗಳಿವೆ. ಎಲ್ಲ ರಾಜ್ಯಗಳಲ್ಲಿಯೂ ಅಭಿವೃದ್ಧಿ ಒಂದೆರಡು ಜಿಲ್ಲೆಗಳಿಗೆ ಮಾತ್ರ ಸೀಮಿತವಾಗಿರುವ ಕಾರಣ ಮಿಕ್ಕ ಜಿಲ್ಲೆಗಳು ಬೇರೆ ರಾಜ್ಯ ಕೇಳುತ್ತಿವೆ. ಉತ್ತರ ಕರ್ನಾಟಕ ವಿಚಾರದಲ್ಲಿಯೂ ಇದೇ ಆಗಿದೆ, ತೆಲಂಗಾಣ ರಾಜ್ಯ ಸೃಷ್ಟಿಯಾಗಲೂ ಇದೇ ಕಾರಣ ಎಂದು ಹೇಳಿದರು.

ಕೇಂದ್ರ ಸರ್ಕಾರ ಮನೆಯ ಹಿರಿಯ ಸದಸ್ಯನಂತೆ ವರ್ತಿಸಬೇಕು. ಆದರೆ, ಲಭ್ಯ ಸಂಪನ್ಮೂಲ ಹಂಚಿಕೆ ಮಾಡುವಲ್ಲಿ ವಿಫಲವಾಗಿದೆ. ಇದೆಲ್ಲ ದೆಹಲಿಯ ಪ್ರಭುಗಳಿಗೆ ಅರ್ಥವಾಗುತ್ತಿಲ್ಲ. ಒಕ್ಕೂಟ ವ್ಯವಸ್ಥೆಗೂ ಶಕ್ತಿ ತುಂಬುವಲ್ಲಿ ಕೂಡ ಸೋತಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಎಂಎಲ್‌ಸಿ ಎನ್.ರವಿಕುಮಾರ್, ಸಂಸದ ತೇಜಸ್ವಿ ಸೂರ್ಯ ಮಾತನಾಡಿದರು.

## ಕೇಂದ್ರಕ್ಕೂ ನೀಟ್‌ಗೂ ಏನು ಸಂಬಂಧ?

ಮೈಸೂರು: ಕೇಂದ್ರ ಸರ್ಕಾರಕ್ಕೂ ನೀಟ್‌ಗೂ ಏನು ಸಂಬಂಧ. ಇದು ನಮ್ಮ ರಾಜ್ಯಕ್ಕೆ ಏಕೆ ಬೇಕು. ನಾವುಗಳು ಬಂಡವಾಳ ಹಾಕಿ ವೈದ್ಯಕೀಯ ಕಾಲೇಜು ಸ್ಥಾಪಿಸಿ ಉತ್ತರ ಭಾರತದವರಿಗೆ ಕೆಂಪು ಹಾಸಿಗೆ ಹಾಕಿ ಏಕೆ ಎಂಬಿಬಿಎಸ್ ಸೀಟ್ ಕೊಡಬೇಕು. ಇದರಿಂದ ಕನ್ನಡದ ಮಕ್ಕಳಿಗೆ ಅನ್ಯಾಯವಾಗುವುದಿಲ್ಲವೇ? ಈ ವಿಷಯದ ಕುರಿತು ಸಂಸತ್‌ನಲ್ಲಿ ಧ್ವನಿಯೆತ್ತಬೇಕು ಎಂದು ವೇದಿಕೆಯಲ್ಲಿದ್ದ ಸಂಸದ ತೇಜಸ್ವಿ ಸೂರ್ಯಗೆ ಸಚಿವ ಮಾಧುಸ್ವಾಮಿ ಹೇಳಿದರು. ಶನಿವಾರ ನಡೆದ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮಾತನಾಡಿ, ನೀಟ್ ಪರೀಕ್ಷೆ ವಿರುದ್ಧ ತಮಿಳುನಾಡು ಸರ್ಕಾರ ಕೋರ್ಟ್ ಮೊರೆ ಹೋಗಿ ಕೊಂಚಮಟ್ಟಿಗಾದ್ದರೂ ಗೆದ್ದಿದೆ. ಇದರ ಫಲವಾಗಿ 75:25 ಅನುಪಾತದಲ್ಲಿ ಸೀಟು ಹಂಚಿಕೆಯಾಗಿದ್ದು ಇದರಲ್ಲಿ ಶೇ.25 ಸೀಟ್ ಅಲ್ಲಿಯ ತಮಿಳರಿಗೆ ದೊರೆಯುವಂತಾಗಿದೆ. ನಮ್ಮಲ್ಲಿ ಹೀಗೆ ಹೋರಾಟ ಮಾಡಲಾಗಲಿಲ್ಲ. ಇದರ ಪರಿಣಾಮವನ್ನು ಭವಿಷ್ಯದಲ್ಲಿ ಎದುರಿಸಬೇಕಾಗುತ್ತದೆ. ಈ ಅನ್ಯಾಯವನ್ನು ಸರಿಪಡಿಸದಿದ್ದರೆ ಮುಂದಿನ ದಿನಗಳಲ್ಲಿ ಸೂಪರ್ ಸ್ಪೆಷಾಲಿಟಿ ಹಾಸ್ಪಿಟಲ್‌ನ ವೈದ್ಯರು ಸಾಯುವ ಸ್ಥಿತಿ ಬರಲಿದೆ ಎಂದು ಎಚ್ಚರಿಸಿದರು.